# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 174 /2022-23 ದಿನಾಂಕ : 17-10-2022

ದಿನಾಂಕ: 15-10-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ:174 ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 10 | ಶ್ರೀ.ನಿಂಗಪ್ಪ | ಆರ್.ಐ (ವಿದ್ಯುತ್) ಬೆಸ್ಕಾಂ ಡಬ್ಲ್ಯೂ-02 ಉಪವಿಭಾಗ ಶಂಕರಪುರಂ | |
| 11 | ಶ್ರೀ. ಸರ್ದಾರ್ | ಜೆ.ಇ/ಎಸ್-2/ಡಬ್ಲ್ಯೂ-2 ಬೆಸ್ಕಾಂ | 9449866105 |
| 12 | ಶ್ರೀ.ನವೀನಕುಮಾರ್ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ | - |

ದಿನಾಂಕ 15-10-2022 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಮು.ತಿ.ನೋ

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸವನಗುಡಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಈ ಕೆಳಕಂಡ ವಿಷಯಗಳನ್ನು ಸಭೆಯಲ್ಲಿ ಪ್ರಸ್ತಾಪಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು, ಅವುಗಳೆಂದರೆ:-

1. ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಬೊಲ್ಯಾರ್ಡ್ಸ್‌ಗಳನ್ನು ಅಳವಡಿಸುವುದು.
2. ಆರ್.ವಿ.ರಸ್ತೆಯ ಟೀಚರ್ಸ್ ಕಾಲೇಜ್ ಬಳಿಯಲ್ಲಿ ಹೇರ್‌ಕಟಿಂಗ್ ಸಲೂನ್ ಮುಂಭಾಗದಲ್ಲಿ ಬಸ್ ಶೆಲ್ಟರ್ ಅನ್ನು ನಿರ್ಮಿಸುವುದು.
3. ಶ್ರೀ. ರಾಮಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ಹಸುಗಳ ಶೆಡ್ ಅನ್ನು ತೆರವುಗೊಳಿಸುವುದು.
4. ಸರ್ವೇಯರ್ ರಸ್ತೆಯಲ್ಲಿರುವ ಹಾರ್ಡ್‌ವೇರ್ ಶಾಪ್ ಕಟ್ಟಡದ ಮಾಲೀಕರು ಕನ್ಸರ್‌ವೆನ್ಸಿಯನ್ನು ಒತ್ತುವರಿ ಮಾಡಿದ್ದು ತೆರವುಗೊಳಿಸುವುದು.
5. ಕೆ.ಆರ್. ರಸ್ತೆಯಲ್ಲಿರುವ ನರ್ಸರಿಯನ್ನು ತೆರವುಗೊಳಿಸುವುದು.
6. ವಾಣಿವಿಳಾಸ ರಸ್ತೆ ಮೇಲು ಸೇತುವೆ ಕೆಳಗಡೆ ಬೆಳಗಿನ ಜಾವ 3.00 ಘಂಟೆಗೆ ಅಂಗಡಿಗಳನ್ನು ಹಾಕುತ್ತಿದ್ದುಮ ಇವುಗಳನ್ನು ತೆರವುಗೊಳಿಸುವುದು.
7. ಕನಕಪುರಂ ರಸ್ತೆಯಲ್ಲಿರುವ ಹಳೆಯ ಹೋಂ ಸ್ಕೂಲ್ ಕಟ್ಟಡದ ಮಾಲೀಕರು ಪಾಲಿಕೆಗೆ ಸೇರಿದ ಜಾಗವನ್ನು ಫೆನ್ಸಿಂಗ್ ತೆರವುಗೊಳಿಸಿ ಅತಿಕ್ರಮಣ ಮಾಡಿರುವುದನ್ನು ಸರಿಪಡಿಸುವುದು.

ಮಾನ್ಯ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಕೂಲಂಕುಷವಾಗಿ ಚರ್ಚೆ ಮಾಡಲಾಗಿ ಸದರಿ ವಿಷಯಗಳ ಬಗ್ಗೆ ಸೂಕ್ತ ರೀತಿಯಲ್ಲಿ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ರಾಮಯ್ಯಂಗಾರ್ ರಸ್ತೆಯ ಶ್ರೀ. ಓ.ವಿ. ಜಯಕುಮಾರ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ Abanded chicles ಗಳನ್ನು ಕಂಡು ಹಿಡಿದು ಅವುಗಳನ್ನು ತೆರವುಗೊಳಿಸುವಂತೆ ಮತ್ತು ವಾರ್ಡ್‌ನಲ್ಲಿ ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿ ಕೂಡುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕೆಂದು ಕೋರಿದರು. ಆದ ಮಾನ್ಯ ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರು ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ನಂತರ ವಿ.ವಿ.ಪುರಂನ ಶ್ರೀ.ವಿ.ಎಸ್.ಎಸ್.ಮೂರ್ತಿರವರು ಮಾತನಾಡಿ ರಾಮಯ್ಯಂಗಾರ್ ರಸ್ತೆ ಮತ್ತು ನ್ಯಾಷನಲ್ ಹೈ ಸ್ಕೂಲ್ ರಸ್ತೆಗಳಲ್ಲಿ ಗುಂಡಿಗಳಾಗಿದ್ದು ಅವುಗಳನ್ನು ಮುಚ್ಚುವಂತೆ ಕೋರಿದರು. ಮತ್ತು ಸಮರ್ಪಕವಾಗಿ ತ್ಯಾಜ್ಯ ವಿಲೇವಾರಿಯಾಗುತ್ತಿಲ್ಲವೆಂದು ಸಭೆಯ ಗಮನಕ್ಕೆ ತಂದರು. ಈ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಸಹಾಯಕ ಅಭಿಯಂತರರು ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ಪು.ತಿ.ನೋ

ನಂತರ ವಾರ್ಡ್‌ನ ಅಭಿಯಂತರರು ಮಾತನಾಡಿ ಪಾಪಯ್ಯ ರಸ್ತೆಯ ಹಿಂಭಾಗದ ಕನ್ಸರ್‌ವೆನ್ಸಿಯಲ್ಲಿ ಬೆಸ್ಕಾಂನಿಂದ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಿ ಡೆಬ್ರೀಸ್‌ನ್ನು ಸ್ಥಳದಲ್ಲಿಯೇ ಬಿಟ್ಟಿರುವುದನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂನ ಕಿರಿಯ ಅಭಿಯಂತರರಿಗೆ ಸೂಚಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು ಹಾಗೂ | ನೋಡಲ್ ಅಧಿಕಾರಿಗಳು |
| ಸಹಾಯಕ ಅಭಿಯಂತರರು | ವಾರ್ಡ್ ಸಂಖ್ಯೆ: 174 ಹಾಗೂ |
| ವಾರ್ಡ್ -174 ವಿ. ವಿ.ಪುರಂ | ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |